ಆಸ್ಪತ್ರೆಯ ಮೊದಲ ಹಂತದ ಕಾಮಗಾರಿಯ ರೂ. 100 ಲಕ್ಷದ ಅಂದಾಜಿಗೆ ಅನುಮೋದನೆ ನೀಡಲಾಯಿತು. ಲೋಕೋಪಯೋಗಿ ಇಲಾಖೆಯು ಕಾಮಗಾರಿಯನ್ನು ಪ್ರಾರಂಭಿಸಿ ರೂ. 49.56 ಲಕ್ಷಗಳ ವೆಚ್ಚದಲ್ಲಿ ಮೊದಲನೆಯ ಮಹಡಿಯನ್ನು ಭಾಗಶಃ ಪೂರ್ಣಗೊಳಿಸಿ ಅನುದಾನದ ಕೊರತೆಯಿಂದ ಕೆಲಸವನ್ನು ನಿಲ್ಲಿಸಿತು. ತದನಂತರ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಈ ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಅಭಿವೃದ್ಧಿ ಪಡಿಸುವ ಪ್ರಸ್ತಾವನೆಯನ್ನು ಅಳವಡಿಸಲಾಗಿದ್ದು ರೂ. 93.80 ಲಕ್ಷ ನಿಗದಿಪಡಿಸಲಾಗಿದೆ. ಈ ಕಾಮಗಾರಿಯ ಸವಿಸ್ತಾರ ನಕ್ಷೆಗೆ ವಿಶ್ವಬ್ಯಾಂಕ್ ವಾಸ್ತು ಶಿಲ್ಪಿಯವರ ಒಪ್ಪಿಗೆ ದೊರೆತಿದ್ದು ರೂ. 180 ಲಕ್ಷದ ಅಂದಾಜಿಗೆ ಅನುಮೋದಿತವಾಗಿದೆ. ಈ ಪ್ರಸ್ತಾವನೆಯಡಿ ಅಪೂರ್ಣವಾಗಿರುವ ಎರಡು ಮಹಡಿಗಳನ್ನು ಪೂರ್ಣಗೊಳಿಸುವುದು. ಈಗಿರುವ ಆಸ್ಪತ್ರೆಯನ್ನು ನವೀಕರಿಸಿ ವಸತಿ ಗೃಹಗಳನ್ನಾಗಿ ಮಾರ್ಪಡಿಸುವುದು. ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಮತ್ತು ವಿದ್ಯುತ್ ಕೆಲಸ ಕಾರ್ಯಗಳು ಸೇರಿರುತ್ತವೆ. ಟೆಂಡರುಗಳ ಮೌಲ್ಯ ಮಾಪನದ ನಂತರ ಕಾಮಗಾರಿಯನ್ನು ಗುತ್ತಿಗೆದಾರರಿಗೆ ವಹಿಸಲಾಗಿದ್ದು ಕೆಲಸ ಕಾರ್ಯಗಳು 17-1-2000 ರಂದು ಪ್ರಾರಂಭವಾಗಿವ.

ಇ) ಪ್ರಸ್ತುತ ಇರುವ ಆಸ್ಪತ್ರೆಯಲ್ಲಿ ಹಾಸಿಗೆಗಳ ಕೊರತೆಯು ಕಂಡು ಬಂದಿದ್ದು ಇವುಗಳ ಖರೀದಿಗಾಗಿ ಜಿಲ್ಲಾ ಪಂಚಾಯತ್, ಕೋಲಾರ ಅಗತ್ಯ ಅನುದಾನವನ್ನು ಈ ಸಾಲಿನಲ್ಲಿ ಒದಗಿಸಿದೆ ಹಾಗೂ ಹಾಸಿಗೆಗಳನ್ನು ಸದ್ಯದಲ್ಲಿಯೇ ಖರೀದಿಸಿ ಆಸ್ಪತ್ರೆಗೆ ಒದಗಿಸಲಾಗುವುದು. ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ 97 ವಿವಿಧ ಉಪಕರಣಗಳನ್ನು ಒದಗಿಸಲಾಗಿದೆ. ಆಸ್ಪತ್ರೆಯಲ್ಲಿ ವೈದ್ಯರ ಕೊರತೆಯಿದ್ದು ಇಲಾಖಾ ನೇಮಕಾತಿ ಸಮಿತಿಯು ವೈದ್ಯರ ತಾತ್ಕಾಲಿಕ ಪಟ್ಟಿಯನ್ನು ಸಿದ್ದಪಡಿಸಿದ್ದು ನೇಮಕಾತಿಯು ಸದ್ಯದಲ್ಲೇ ಆಗುವ ಸಂಭವವಿದೆ. ಆಸ್ಪತ್ರೆಯಲ್ಲಿ ಔಷಧಗಳ ಕೊರತೆ ಇರುವುದಿಲ್ಲ.

ಚಿಂತಾಮಣಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಹೆಚ್ಚುವರಿ ಕೊಠಡಿಗಳ ಮಂಜೂರಾತಿ

284 - ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಚಿಂತಾಮಣಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಹೆಚ್ಚುವರಿ ಕೊಠಡಿಗಳು ಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಹೌದಾದರೆ, ಹೆಚ್ಚುವರಿ ಕೊಠಡಿಗಳಿಗೆ ಕಾಮಗಾರಿಗೆ ಮಂಜೂರಾತಿ ನೀಡಿದೆಯೇ?

3) ಇದಕ್ಕೆ ಅಂದಾಜು ವೆಚ್ಚ ಮತ್ತು ಅಯವ್ಯಯ ವಿವರಗಳನ್ನು ಒದಗಿಸುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

1) ಹೌದು.

2) ಹೌದು.

3) ಸರ್ಕಾರವು ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು 8 ಲಕ್ಷ ರೂಪಾಯಿಗಳ ಕಾಮಗಾರಿಗೆ ಅನುಮತಿ ನೀಡಿದೆ.

ಶಿರಹಟ್ಟಿ ತಾಲ್ಲೂಕಿನ ಶಾಲಾ ಕೊಠಡಿಗಳ ಕೊರತೆ

286 - ಶ್ರೀ ಗಡ್ಡದೇವರ ಮಠ ಗದ್ದಿಯ್ಯ ಶಿವಮೂರ್ತಯ್ಯ (ಶಿರಹಟ್ಟಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಶಿರಹಟ್ಟಿ ತಾಲ್ಲೂಕಿನಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಕೂಡಲೇ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರವು ಕ್ರಮಕೈಗೊಳ್ಳುವುದೇ?*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಈ ಖಾಲಿ ಹುದ್ದೆಗಳನ್ನು ಮುಂದಿನ ನೇಮಕಾತಿಯಲ್ಲಿ ಭರ್ತಿ ಮಾಡಲಾಗುವುದು.

ಶಿರಹಟ್ಟಿ ತಾಲ್ಲೂಕಿನ ಲಕ್ಷ್ಮೇಶ್ವರನಗದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳಿಗೆ ಕೊಠಡಿಗಳ ಕೊರತೆ

287 - ಶ್ರೀ ಗಡ್ಡದೇವರ ಮಠ ಗದ್ದಯ್ಯ ಶಿವಮೂರ್ತಯ್ಯ (ಶಿರಹಟ್ಟಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಶಿರಹಟ್ಟಿ ತಾಲ್ಲೂಕಿನ ಲಕ್ಷ್ಮೇಶ್ವರ ನಗರದಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಕೊಠಡಿಗಳ ಕೊರತೆ ನೀಗಿಸಲು ಸರ್ಕಾರವು ಕ್ರಮಕೈಗೊಳ್ಳುವುದೇ?*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಶಿರಹಟ್ಟಿ ತಾಲ್ಲೂಕಿನ ಲಕ್ಷ್ಮೇಶ್ವರ ನಗರದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 24 ಕೊಠಡಿಗಳ ಅವಶ್ಯಕತೆ ಇದ್ದುನಗರ ಪ್ರದೇಶದಲ್ಲಿ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ಪ್ರತಿ ವರ್ಷ ಮಂಜೂರಾದ ಅನುದಾನದ ಮಿತಿಯೊಳಗೆ ಹೆಚ್ಚುವರಿ ಶಾಲಾ ಕೊಠಡಿಗಳನ್ನು ಹಂತ ಹಂತವಾಗಿ ನಿರ್ಮಿಸಲು ಕ್ರಮ ಕೈಗೊಳ್ಳಾಗುತ್ತದೆ.